(iii) ಕರ್ನಾಟಕ ಮೋಟಾರು ವಾಹನಗಳ ತೆರಿಗೆ ಮತ್ತು ಕೆಲವು ಇತರ ಕಾನೂನು (ತಿದ್ದುಪಡಿ) ವಿಧೇಯಕ, 2003

ಪರ್ಯಾಲೋಚನಾ ಪ್ರಸ್ತಾವ

ಶ್ರೀ ಡಿ.ಬಿ. ಚಂದ್ರೇಗೌಡ (ಕಾನೂನು ಮತ್ತು ಸಂಸದೀಯ ಸಚಿವರು) (ಸಾರಿಗೆ ಸಚಿವರ ಪರವಾಗಿ):- ಮಾನ್ಯ ಅಧ್ಯಕ್ಷರೇ, "2003ನೇ ಸಾಲಿನ ಕರ್ನಾಟಕ ಮೋಟಾರು ವಾಹನಗಳ ತೆರಿಗೆ ಮತ್ತು ಕೆಲವು ಇತರ ಕಾನೂನು (ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಕೋರುತ್ತೇನೆ."

ಪ್ರಸ್ತಾವವನ್ನು ಮಂಡಿಸಲಾಯಿತು

ಅಧ್ಯಕ್ಷರು:- ಪ್ರಸ್ತಾವ ಏನೆಂದರೆ,

"2003ನೇ ಸಾಲಿನ ಕರ್ನಾಟಕ ಮೋಟಾರು ವಾಹನಗಳ ತೆರಿಗೆ ಮತ್ತು ಕೆಲವು ಇತರ ಕಾನೂನು (ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸುವುದು.

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು

ಖಂಡ ಖಂಡವಾಗಿ ವಿಧೇಯಕವನ್ನು ಪರ್ಯಾಲೋಚಿಸುವುದು

ಖಂಡ 2 ರಿಂದ 4ರ ವರೆಗೆ:

ಅಧ್ಯಕ್ಷರು:- ಪ್ರಸ್ತಾವ ಏನೆಂದರೆ,

"ಖಂಡ 2 ರಿಂದ 4 ರ ವರೆಗೆ, ಎರಡೂ ಸೇರಿದಂತೆ, ವಿಧೇಯಕದ ಅಂಗವಾಗಿರುತ್ತದೆ".

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು

(ಖಂಡ 2 ರಿಂದ 4ರ ವರೆಗೆ, ಎರಡೂ ಸೇರಿದಂತೆ, ವಿಧೇಯಕಕ್ಕೆ ಸೇರಿಸಲ್ಪಟ್ಟಿತು)

ಖಂಡ 1 ಇತ್ಯಾದಿ:

ಅಧ್ಯಕ್ಷರು:- ಪ್ರಸ್ತಾವ ಏನೆಂದರೆ,

"ಮೊದಲನೆಯ ಖಂಡ, ದೀರ್ಘ ಶೀರ್ಷಿಕೆ, ಪ್ರಸ್ತಾವನೆ ಹಾಗೂ ಅಧಿನಿಯಮಗೊಳಿಸುವ ಸೂತ್ರ ಸಂಹಿತೆ ವಿಧೇಯಕದ ಭಾಗವಾಗಿರುತ್ತದೆ"

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು

(ಮೊದಲನೆಯ ಖಂಡ, ದೀರ್ಘಶೀರ್ಷಿಕೆ, ಪ್ರಸ್ತಾವನೆ ಹಾಗೂ ಅಧಿನಿಯಮಗೊಳಿಸುವ ಸೂತ್ರ ಸಂಹಿತೆಗಳನ್ನು ವಿಧೇಯಕಕ್ಕೆ ಸೇರಿಸಲ್ಪಟ್ಟಿತು)

ಪ್ರಸ್ತಾವದ ಅಂಗೀಕಾರ

ಶ್ರೀ ಡಿ.ಬಿ. ಚಂದ್ರೇಗೌಡ (ಕಾನೂನು ಮತ್ತು ಸಂಸದೀಯ ಸಚಿವರು) (ಸಾರಿಗೆ ಸಚಿವರ ಪರವಾಗಿ):- ಮಾನ್ಯ ಅಧ್ಯಕ್ಷರೇ, "2003ನೇ ಸಾಲಿನ ಕರ್ನಾಟಕ ಮೋಟಾರು ವಾಹನಗಳ ತೆರಿಗೆ ಮತ್ತು ಕೆಲವು ಇತರ ಕಾನೂನು (ತಿದ್ದುಪಡಿ) ವಿಧೇಯಕವನ್ನು ಅಂಗೀಕರಿಸಬೇಕೆಂದು ಕೋರುತ್ತೇನೆ".

ಅಧ್ಯಕ್ಷರು:- ಪ್ರಸ್ತಾವ ಏನೆಂದರೆ:

"2003ನೇ ಸಾಲಿನ ಕರ್ನಾಟಕ ಮೋಟಾರು ವಾಹನಗಳ ತೆರಿಗೆ ಮತ್ತು ಕೆಲವು ಇತರ ಕಾನೂನು (ತಿದ್ದುಪಡಿ) ವಿಧೇಯಕವನ್ನು ಅಂಗೀಕರಿಸುವುದು".

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಮಸೂದೆಗೆ ಒಪ್ಪಿಗೆ ನೀಡಲಾಯಿತು.